ಕರ್ನಾಟಕ ಸರ್ಕಾರ

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಬೆಂಗಳೂರು**

ಕಾರ್ಯನಿರ್ವಾಹಕ ನಿರ್ದೇಶಕರ ಕಚೇರಿ,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ,
18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು – 560 012

## ಸುತ್ತೋಲೆ

**ಸಾಮಾನ್ಯ ಪ್ರವೇಶ ಪರೀಕ್ಷೆ–2024ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ.**

### ವೇಳಾಪಟ್ಟಿ

| ದಿನಾಂಕ: | ದಿನ: | ಸಮಯ: | ವಿಷಯ: | ಅಂಕಗಳು: |
|---|---|---|---|---|
| **18–04–2024** | **ಗುರುವಾರ** | ಬೆಳಿಗ್ಗೆ 10.30 ರಿಂದ 11.50 ರ ವರೆಗೆ | ಜೀವಶಾಸ್ತ್ರ | 60 |
| | | ಮಧ್ಯಾಹ್ನ 02.30 ರಿಂದ 03.50 ರ ವರೆಗೆ | ಗಣಿತಶಾಸ್ತ್ರ | 60 |
| **19–04–2024** | **ಶುಕ್ರವಾರ** | ಬೆಳಿಗ್ಗೆ 10.30 ರಿಂದ 11.50 ರ ವರೆಗೆ | ಭೌತಶಾಸ್ತ್ರ | 60 |
| | | ಮಧ್ಯಾಹ್ನ 02.30 ರಿಂದ 03.50 ರ ವರೆಗೆ | ರಸಾಯನ ಶಾಸ್ತ್ರ | 60 |

### ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ. ಸಂ | ಬೆಲ್ ಸಂಖ್ಯೆ | ಬೆಳಗಿನ ಅವಧಿ | ಮಧ್ಯಾಹ್ನದ ಅವಧಿ | ವಿವರಗಳು |
|---|---|---|---|---|
| 01 | ಮೊದಲನೇ ಬೆಲ್ | ಬೆ.10.20 | ಮ. 2.20 | • ಸಿಇಟಿ–2024 ರ ಪ್ರವೇಶ ಪತ್ರವನ್ನು ಮತ್ತು ಮಾನ್ಯತೆ ಇರುವ ಗುರುತಿನ ಚೀಟಿಯನ್ನು ತೋರಿಸಿದರೆ ಮಾತ್ರ, ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ವಿತರಿಸುತ್ತಾರೆ. ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಹೆಸರನ್ನು **ದಪ್ಪಕ್ಷರಗಳಲ್ಲಿ** ಬರೆಯಬೇಕು.<br>• ನಂತರ ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಎಚ್ಚರದಿಂದ ಸಿಇಟಿ ಸಂಖ್ಯೆಯನ್ನು ಬರೆದು ಸಂಬಂಧಿಸಿದ ವೃತ್ತಗಳನ್ನು ತಪ್ಪದೇ ತುಂಬಬೇಕು.<br>• ಅಭ್ಯರ್ಥಿಗಳು ತಾವು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಬರೆದಿರುವ ಸಿಇಟಿ ಸಂಖ್ಯೆಯನ್ನು, ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಸಿಇಟಿ ಸಂಖ್ಯೆಗೆ ಅನುಗುಣವಾಗಿದೆಯೆ ಎಂದು ಪರಿಶೀಲಿಸಿಕೊಳ್ಳಬೇಕು. (ಮತ್ತೊಮ್ಮೆ ಪರಿಶೀಲಿಸುವುದು ಸೂಕ್ತ.) |
| 02 | ಎರಡನೇ ಬೆಲ್ | ಬೆ.10.30 | ಮ. 2.30 | • ಎರಡನೆಯ ಬೆಲ್ ಬೆ. 10.30 / ಮ. 2.30 ಕ್ಕೆ, ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. **"ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ"**. ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>• ಬೆ. 10.35ಕ್ಕೆ / ಮ. 2.35ಕ್ಕೆ ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆದು, ನಂತರ ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ / ಸಿಬ್ಬಂದಿ ವರ್ಗ / ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯಲ್ಲಿನ ವರ್ಷನ್ ಕೋಡ್ ಅನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿನ ನಿಗದಿತ ಜಾಗದಲ್ಲಿ ಬರೆದು ಅದಕ್ಕೆ ಸಂಬಂಧಿಸಿದ ವೃತ್ತಗಳನ್ನು ತುಂಬಬೇಕು. ನಂತರ ಅಭ್ಯರ್ಥಿಗಳು ಓಎಂಆರ್ ನಲ್ಲಿ ನಿಗದಿತ ಜಾಗದಲ್ಲಿ ಸಹಿಯನ್ನು ಮಾಡುವುದು.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯಲ್ಲಿನ ವರ್ಷನ್ ಕೋಡ್ ಮತ್ತು ಕ್ರಮ ಸಂಖ್ಯೆಯನ್ನು ನಾಮಿನಲ್ ರೋಲ್ ನಲ್ಲಿ ಬರೆಯಬೇಕು, ನಂತರ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ.<br>• ಅಭ್ಯರ್ಥಿಗಳು ನಾಮಿನಲ್ ರೋಲ್ ನಲ್ಲಿ ಬರೆದಿರುವ ವಿವರಗಳನ್ನು ತಮಗೆ ನೀಡಿರುವ ಪ್ರಶ್ನೆಪತ್ರಿಕೆ ಮತ್ತು ಓಎಂಆರ್ ಉತ್ತರ ಪತ್ರಿಕೆಯಲ್ಲಿ ಮುದ್ರಿತವಾಗಿರುವ ವಿವರಗಳೊಂದಿಗೆ ಪರಿಶೀಲಿಸಬೇಕು.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ. |
| 03 | ಮೂರನೇ ಬೆಲ್ | ಬೆ.10.40 | ಮ.2.40 | • ಈ ಬೆಲ್ ಆದ ನಂತರ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯನ್ನು ತೆರೆದು ಓಎಂಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಪ್ರಾರಂಭಿಸಲು ಅವಕಾಶ ಕೊಡಲಾಗುವುದು.<br>• ಬೆ. 10.40 / ಮ. 2.40 ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಬೆ.11.10 | ಮ.3.10 | •ಇದು ಮೊದಲನೆಯ ಎಚ್ಚರಿಕೆ ಬೆಲ್ – ಪರೀಕ್ಷೆಯ ಅರ್ಧ ಗಂಟೆಯ ಅವಧಿ ಮುಗಿದಿರುವುದಕ್ಕಾಗಿ. |
| 05 | ಐದನೇ ಬೆಲ್ | ಬೆ.11.30 | ಮ.3.30 | •ಇದು ಎರಡನೆಯ ಎಚ್ಚರಿಕೆ ಬೆಲ್ – ಪರೀಕ್ಷೆ ಮುಗಿಯಲು ಇಪ್ಪತ್ತು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ |
| 06 | ಆರನೇ ಬೆಲ್ | ಬೆ.11.45 | ಮ.3.45 | •ಇದು ಕೊನೆಯ ಎಚ್ಚರಿಕೆಯ ಬೆಲ್ – ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ. |
| 07 | ಏಳನೇ ಹಾಗೂ ಕೊನೆಯ ಬೆಲ್ | ಬೆ.11.50 | ಮ. 3.50 | • ಪರೀಕ್ಷೆ ಮುಕ್ತಾಯ.<br>• ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಎಲ್ಲಾ ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಪಡೆಯುವುದು.<br>• ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಓ.ಎಂ.ಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕಚೇರಿ ಪ್ರತಿ) ನಿಧಾನವಾಗಿ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಹಿಂದಿರುಗಿಸಬೇಕು. |

ಗಮನಿಸಿ: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಲ್ಲಿ ಈ ಕೆಳಕಂಡ ರೀತಿಯ ತಪ್ಪುಗಳನ್ನು ಎಸಗಿದರೆ ಅಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತು ಕ್ರಮ ಹಾಗು ಅಪರಾಧ ಮೊಕದ್ದಮೆಯನ್ನು ಹೂಡಲಾಗುವುದು:

ಗಲಾಟೆ ಮಾಡಿದರೆ / ನಿಶ್ಯಬ್ಧತೆಯನ್ನು ಕಾಪಾಡದಿದ್ದರೆ; ಪರೀಕ್ಷಾ ಸಮಯದಲ್ಲಿ ವಿಷಯಕ್ಕೆ ಸಂಬಂಧಿಸಿದ ಪುಸ್ತಕ, ಚೀಟಿ ಇತ್ಯಾದಿಗಳನ್ನು ಬಳಸಿದರೆ; ಬೇರೆ ಅಭ್ಯರ್ಥಿಗಳ ಜೊತೆ ಮಾತನಾಡುವುದು ಅಥವಾ ಸಂಜ್ಞೆ ಮಾಡುವುದು; ಅಭ್ಯರ್ಥಿಯು ಬೇರೆ ಅಭ್ಯರ್ಥಿಗಳ ಉತ್ತರ ಪತ್ರಿಕೆಯಿಂದ ಅಥವಾ ಇನ್ನಾವುದೇ ಮೂಲಗಳಿಂದ ನಕಲು ಮಾಡುತ್ತಿದ್ದರೆ; ಅಭ್ಯರ್ಥಿಯು ತನ್ನ ಉತ್ತರ ಪತ್ರಿಕೆ ಬೇರೆ ಕಡೆ ವರ್ಗಾಯಿಸಿದರೆ; ಬದಲಿ ಅಭ್ಯರ್ಥಿಯಾಗಿದ್ದರೆ; ಪರೀಕ್ಷಾ ಅವಧಿಯಲ್ಲಿ ಅಥವಾ ಪರೀಕ್ಷೆಯ ನಂತರ ಉತ್ತರ ಪತ್ರಿಕೆಯನ್ನು ಪರೀಕ್ಷಾ ಕೊಠಡಿಯಿಂದ ಹೊರಗಡೆ ತೆಗೆದುಕೊಂಡು ಹೋದಲ್ಲಿ; ಉತ್ತರ ಪತ್ರಿಕೆಯನ್ನು ಹರಿದು ಹಾಕುವುದು ಅಥವಾ ಇನ್ನಾವುದೇ ಪರೀಕ್ಷಾ ಅವ್ಯವಹಾರಗಳು ಕಂಡು ಬಂದಲ್ಲಿ.

ಸಹಿ/–

ಕಾರ್ಯನಿರ್ವಾಹಕ ನಿರ್ದೇಶಕರು.